ಮೈಸೂರ ಗೆಜೆಟ್ ಚಂದಾದಾರು ವಗೈರೆ.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟ್ಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸು ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.	ಟಪ್ಪಾಲ್ ಹಾಸಲ್ ಮೈಸೂರು ಸೀಮೆ ಶಿವಾಯಿ ಇತರ ಸ್ಥಳಗಳಿಗೆ
	ರೂ. ಆ.	ರೂ. ಆ.
ಇಂಗ್ಲಿಷ್ ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲಿಷ್ ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8
ಚಕ್ಷ್ ಮಾಹೇ ಯಾ ಕ್ವಾರ್ಟರಿಗೆ		

ದಾಮೂಪಾಯಿ ಪ್ರಕಾರ ದರಗಳು

	ರೂ. ಆ.
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ, ರೆಗ್ಯುಲೇಷ್ಸ್ ಯಾ ಆಕ್ಟ್ಗಳು ಯಾವದೂ ಇಲ್ಲದಿದ್ದರೆ.	0 8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜ್ ಕೇಳಿ ತಿಳಿದುಕೊಳ್ಳಬಹುದು.

1891ನೆ ಇಸವಿ ಜುಲೈ 2ನೆ ಮಕ್ತುಂ 155ನೆ ನಂಬರ್ ಉಳ್ಳ ಗವರ್ನಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ಸೀಮೆಯಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳು ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭಾವಿಕೆ ಕೆಲಸ ನೋಡುತಲಿದ್ದಾರೆಂಬದಾಗಿ ಆಯಾ ತಾಲ್ಲೂಕು ಅಮಲ್‌ದಾರರಿಂದ ಒಂದು ಸರಟಿಫಿಕೇಟನ್ನ ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೆ ಇಸವಿ ಜೂನ್ 21ನೆ ಮಕ್ತುಂ 24205—6—ಜಿ. 6200ನೆ ನಂಬರ್ ಗವರ್ನಮೆಂಟ್ ಆರ್ಡರ್ ಅನುಸರಿಸಿ ಮೇಲ್ಕಂಡ ರಿಯಾಯಿತಿ ದರವು, ನಾಡ ಪಟೇಲರಿಗೂ ಲಗಾವ್ ಮಾಡಲ್ಪಟ್ಟಿರುತ್ತೆ.

1900ನೆ ಇಸವಿ ಆಗಸ್ಟ್ 21ನೆ ಮಕ್ತುಂ 2633—41 ಮಿಸ್. 558ನೆ ನಂಬರ್ ಗವರ್ನಮೆಂಟ್ ಪ್ರೊಸೀಡಿಂಗ್ಸ್ ಅನುಸರಿಸಿ, ಮೈಸೂರು ದೆಸರಾ ರೆಪ್ರಜೆಂಟೇಟಿವ್ ಮೆಂಬರುಗಳಾಗಿರುವ ಕಾಲದ ವರಿಗೆ ಮಾತ್ರ ಸದರಿ ಮೆಂಬರುಗಳವರಿಗೆ ಇಂಗ್ಲಿಷ್ ಅಥವಾ ಕನ್ನಡ ಗೆಜೆಟ್ ಅರ್ಧ ಛಾರ್ಜಿಗೆ ಕೊಡಲ್ಪಡುತ್ತೆ.

ಸಿವಿಲ್ ಕೋರ್ಟ್‌ನಿಂದ ಕೊಡಲ್ಪಡುವ 1901ನೆ ಇಸವಿ VIIನೆ ರೆಗ್ಯುಲೇಷ್ಸ್ ಅನುಸರಿಸಿ ಸರ್ಟಿಫಿಕೇಟ್ ಬಗ್ಗೆ ನೋಟಿಸುಗಳು :—

	ರೂ. ಆ.
ಮೊದಲನೇ ದಫಾ ಫಾಯಿಷ್ ಮಾಡತಕ್ಕ ಬಗ್ಗೆ ಇಂಗ್ಲೀಷು ಅಥವಾ ಕನ್ನಡ	2 8
ಎರಡನೇ ಸಲ ವ ಆತರುವಾಯ ಪ್ರತಿ ಆವರ್ತಿಗೂ ಡಿಟೋ	1 4

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 347ನೆ ಸೆಕ್ಷನ್ ಅನುಸರಿಸಿ ದಿವಾಳಿ ಅಪ್ಲಿಕೇಷನ್‌ಗಳ ಬಗ್ಗೆ ನೋಟಿಸುಗಳಿಗೆ :—

ಮೊದಲನೇ ಸಲಕ್ಕೆ	5 0
ಎರಡನೇ ವ ಆತರುವಾಯ ಪ್ರತಿ ದಫಾಕ್ಕೆ	2 8

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 354ನೆ ಸೆಕ್ಷನ್ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳಿ ಹುಕುಂಗಳು ಬಗರೆ ಚಾರ್ಜ್ ಪ್ರಕಟಿಸಲ್ಪಡುತ್ತವೆ.

ಡ್ಯೂಪ್ಲಿಕೇಟ್ ಕಾಪೀ ಪಟ್ಟೆ ವಗೈರೆ ಕೊಡುವ ಬಗ್ಗೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸುಗಳಿಗೆ :—

ಮೊದಲನೇ ಸಲಕ್ಕೆ	ಪುಟ 1ಕ್ಕೆ	10 0
ಎರಡನೇ ಸಲ ವ ಆತರುವಾಯ ಪ್ರತಿ ಸಲಕ್ಕೂ	,,	5 0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳ ಪ್ರಕಾರ ಚಾರ್ಜ್ ಮಾಡಲ್ಪಡುತ್ತೆ :—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ	ಪಬ್ಲಿ 1ಕ್ಕೆ	0 8
ಎರಡನೇ ದಫಾ	ಡಿಟೋ ಡಿಟೋ	0 6
ಮೂರನೇ ವ ಆತರುವಾಯ ಪ್ರತಿ ಸಲಕ್ಕೆ		0 4

ಪರಾ.—ಗೆಜೆಟ್ ಚಂದಾ ಮತ್ತು ಕೋರ್ಟುಗಳಿಂದ ಕಳುಹಿಸಲ್ಪಡುವ ಪ್ರಕಟಣೆಗಳ ಛಾರ್ಜ್ ಬಾಬತು ಬೊಬಲಗುಗಳನ್ನು ಸರ್ಕಾರಿ ಖಜಾನೆಗಳು ಜಮೆ ಹಿಡಿಯತಕ್ಕ ಬಗ್ಗೆ ಕಂಟ್ರೋಲರವರ ಅಪ್ಪಣೆ ಆಗಿರುತ್ತೆಯಾದ್ದರಿಂದ ಸದರಿ ಬೊಬಲಗುಗಳನ್ನು ಖಜಾನೆಗೇನೆ ಕಳುಹಿಸಿಕೊಟ್ಟು ಅಲ್ಲಿಂದ ಪಡೆದ ರಶೀತಿಯನ್ನು ಮಾತ್ರ ಆಫೀಸ್ ಮಜಕೂರಿಗೆ ದಾಖಲೆ ಬಗ್ಗೆ ರವಾನಿಸತಕ್ಕದ್ದು. ಮನಿ ಆರ್ಡರ್ ವಗೈರೆ ಕಳುಹಿಸಿಕೊಟ್ಟಲ್ಲಿ ಅಂಗೀಕರಿಸಲ್ಪಡುವದಿಲ್ಲಾ. ವಾಪಸ್ ಮಾಡಲ್ಪಡುತ್ತೆ.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಗಾದ ದರಖಾಸ್ತುಗಳು ಮೈಸೂರ್ ಗವರ್ನಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರಿಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದ್‌ಗಳು ಇದರಡಿ ರುಜು ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಾಗಾಯತು ಒಂದು ವಾರದ ಬಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗೆಜೆಟ್‌ನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸು ವ ಇಸ್ತಿಹಾರ್‌ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಮಂಗಳವಾರದ ದಿವಸ ಮಧ್ಯಾನ್ನ 12 ಘಂಟೆ ವಳಗಾಗಿ ಕಂಪೈಲರ್ ಆಫೀಸಿಗೆ ತಲಪಬೇಕಾಗಿರುತ್ತೆ. ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅಸ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಸಲ್ಪಡುತ್ತೆಂಬ ಖಾತರ್ ಇಲ್ಲ.

ಡಿ. ಬಿ. ರಾಮಚಂದ್ರ ಮೊದಲಿಯಾರ್,
ಕಂಪೈಲರ್, ಮೈಸೂರು ಗೆಜೆಟ್.